ಕರ್ನಾಟಕ ವಿಧಾನ ಪರಿಷತ್

ಸದಸ್ಯರ ಹೆಸರು : ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭಾ ಕ್ಷೇತ್ರ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 92(13)
ಉತ್ತರಿಸಬೇಕಾದ ದಿನಾಂಕ : 15-7-2019
ಉತ್ತರಿಸುವ ಸಚಿವರು : ಪಶು ಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು

ಕ್ರ ಸಂ	ಪ್ರಶ್ನೆಗಳು	ಉತ್ತರಗಳು
(ಅ)	ರಾಯಚೂರು ಜಿಲ್ಲೆಯಲ್ಲಿ ಪಶು ಸಂಗೋಪನೆ ಕಾಲೇಜು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು:	ರಾಯಚೂರು ಜಿಲ್ಲೆಯಲ್ಲಿ ಪಶು ಸಂಗೋಪನೆ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.
(ಆ)	ರಾಯಚೂರು ಜಿಲ್ಲೆಯಲ್ಲಿರುವ ಜಂಟಿ-ನಿರ್ದೇಶಕರ ಕಛೇರಿ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು:	ಸರ್ಕಾರದ ಆದೇಶ ಸಂಖ್ಯೆ: ಪಸಂಮೀ 152 ಪಅಸೇ 2018, ದಿನಾಂಕ: 23-07-2018 ರಲ್ಲಿ ರಾಯಚೂರು ಪಟ್ಟಣದಲ್ಲಿ ಜಂಟಿ ನಿರ್ದೇಶಕರ ಕಛೇರಿ ಪ್ರಾರಂಭವಾಗಿರುತ್ತದೆ. ಸದ್ಯಕ್ಕೆ ಕಛೇರಿಯು ಉಪ ನಿರ್ದೇಶಕರ ಕಛೇರಿ ಆವರಣದಲ್ಲಿ ಕರ್ತವ್ಯ ನಿರ್ವಹಿಸುತ್ತಿದೆ. ಜಿಲ್ಲೆಯ ಮೀನುಗಾರಿಕೆ ಹಿರಿಯ ಸಹಾಯಕ ನಿರ್ದೇಶಕರ ಕಛೇರಿ ಆವರಣದಲ್ಲಿ ಒಂದು ಎಕರೆ ಜಾಗವನ್ನು ಜಂಟಿ ನಿರ್ದೇಶಕರು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ರಾಯಚೂರು ಇವರ ಕಛೇರಿಗಾಗಿ ಸರ್ಕಾರದ ಆದೇಶ ಸಂ: ಪಸಂಮೀ 127 ಮೀಇಇ 2018, ದಿನಾಂಕ: 23.05.2019 ರಂತೆ, ಸರ್ವೆ ನಂ. 1491/1 ರಲ್ಲಿ 1 ಎಕರೆ ಜಾಗವನ್ನು ಇಲಾಖೆ ಸುಪರ್ದಿಗೆ ಪಡೆಯಲಾಗಿದೆ.
(ಇ)	ರಾಯಚೂರು ಜಿಲ್ಲೆಯಲ್ಲಿರುವ ಪಶು ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು:	ರಾಯಚೂರು ಜಿಲ್ಲೆಯಲ್ಲಿ ಹಾಲಿ 1 ಪಾಲಿಕ್ಲಿನಿಕ್, 27 ಪಶು ಆಸ್ಪತ್ರೆ, 51 ಪಶು ಚಿಕಿತ್ಸಾಲಯ, 22 ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳು ಮತ್ತು 5 ಸಂಚಾರಿ ಪಶು ಚಿಕಿತ್ಸಾಲಯ ಒಟ್ಟು 106 ಪಶುವೈದ್ಯ ಸಂಸ್ಥೆಗಳಿರುತ್ತವೆ. 22 ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳನ್ನು ಹಂತಹಂತವಾಗಿ ಮೇಲ್ದರ್ಜೆಗೇರಿಸಲು ಕ್ರಮವಹಿಸಲಾಗುವುದು.
(ಈ)	ಜಿಲ್ಲೆಯಲ್ಲಿ ಇರುವ ಒಟ್ಟು ಪಶುಗಳ ಸಂಖ್ಯೆ ಎಷ್ಟು: ಇದರ ಅನುಗುಣವಾಗಿ ಆಸ್ಪತ್ರೆಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು:	ಜಿಲ್ಲೆಯಲ್ಲಿನ ಒಟ್ಟು ಜಾನುವಾರುಗಳ ಸಂಖ್ಯೆ: 14,70,919 ಇದ್ದು, ಈಗಾಗಲೇ 106 ಪಶುವೈದ್ಯ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. ಅವಶ್ಯಕತೆ ಮತ್ತು ಜಾನುವಾರು ಸಂಖ್ಯೆಗಳಿಗನುಗುಣವಾಗಿ ಮುಂದಿನ ದಿನಗಳಲ್ಲಿ ಪಶುವೈದ್ಯ ಸಂಸ್ಥೆಗಳನ್ನು ತೆರೆಯುವ ಬಗ್ಗೆ ಪರಿಶೀಲಿಸಲಾಗುವುದು.

ಸಂ: ಪಸಂಮೀ 26 ಪಅಸೇ 2019

(ವೆಂಕಟರಾವ್ ನಾಡಗೌಡ)
ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಪಸಂಮೀ 26 ಪಅಸೇ 2019

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು ದಿನಾಂಕ: 12.07.2019

ಇವರಿಂದ:
ಸರ್ಕಾರದ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು
ವಿಧಾನ ಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ:- ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಎನ್. ಎಸ್. ಬೋಸ್‌ರಾಜು(ವಿಧಾನಸಭಾ ಕ್ಷೇತ್ರ), ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 92(13) ರ ಬಗ್ಗೆ.

*****

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎನ್. ಎಸ್. ಬೋಸ್‌ರಾಜು(ವಿಧಾನಸಭಾ ಕ್ಷೇತ್ರ), ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 92(13)ಕ್ಕೆ ಸಂಬಂಧಿಸಿದಂತೆ ಕನ್ನಡ ಉತ್ತರದ 50 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

15/7/19

12/07/2019
(ಟಿ. ಹನುಮಂತೇಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
(ಪಶುಸಂಗೋಪನೆ)

15/7/19

ಪ್ರತಿ:

ಮಾನ್ಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.